# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 413 (510) |
| ಸದಸ್ಯರ ಹೆಸರು | ಶ್ರೀ ಅ.ದೇವೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | 20.02.2023 |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತುತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಜೀವನೋಪಾಯ ಹಾಗೂ ಉದ್ಯಮಶೀಲತೆ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕಳೆದ ಮೂರು ವರ್ಷಗಳಲ್ಲಿ ಉನ್ನತ ಶಿಕ್ಷಣ ಇಲಾಖೆ ವತಿಯಿಂದ ವಿದ್ಯಾರ್ಥಿಗಳಿಗೆ ಉಚಿತವಾಗಿ ಲ್ಯಾಪ್‌ಟಾಪ್ ವಿತರಿಸಲಾಗಿದೆಯೇ: | 2019-20ನೇ ಸಾಲಿನಲ್ಲಿ ಮಾತ್ರ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಥಮ ಪದವಿ ತರಗತಿಗಳಿಗೆ ಪ್ರವೇಶ ಪಡೆದ ಮತ್ತು ಕೌಟಂಬಿಕ ವಾರ್ಷಿಕ ಆದಾಯ ರೂ. 2.50 ಲಕ್ಷಗಳಿಗಿಂತ ಕಡಿಮೆ ಇದ್ದ ಒಟ್ಟು 109916 ಎಲ್ಲಾ ವರ್ಗಗಳ ವಿದ್ಯಾರ್ಥಿಗಳಿಗೆ ಉಚಿತ ಲ್ಯಾಪ್‌ಟಾಪ್‌ಗಳನ್ನು ಒದಗಿಸಲಾಗಿತ್ತು. ನಂತರದ ವರ್ಷಗಳಲ್ಲಿ ರಾಜ್ಯವಲಯ ಅನುದಾನದಿಂದ ವಿದ್ಯಾರ್ಥಿಗಳಿಗೆ ಉಚಿತವಾಗಿ ಲ್ಯಾಪ್‌ಟಾಪ್ ವಿತರಿಸಲಾಗಿರುವುದಿಲ್ಲ. |
| (ಆ) | ಹಾಗಿದ್ದಲ್ಲಿ, ಯಾವ ಯಾವ ವಿದ್ಯಾರ್ಥಿಗಳಿಗೆ ಹಾಗೂ ಯಾವ ಕಾಲೇಜುಗಳಲ್ಲಿ ಲ್ಯಾಪ್‌ಟಾಪ್ ನೀಡಲಾಗಿದೆಯೇ: (ಜಿಲ್ಲಾವಾರು ಮಾಹಿತಿ ನೀಡುವುದು) | 2019-20ನೇ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಥಮ ಪದವಿ ತರಗತಿಗಳಿಗೆ ಪ್ರವೇಶ ಪಡೆದ ಮತ್ತು ಕೌಟಂಬಿಕ ವಾರ್ಷಿಕ ಆದಾಯ ರೂ. 2.50 ಲಕ್ಷಗಳಿಗಿಂತ ಕಡಿಮೆ ಇದ್ದ ವಿದ್ಯಾರ್ಥಿಗಳಿಗೆ ನೀಡಲಾಗಿರುವ ಉಚಿತ ಲ್ಯಾಪ್ ಟಾಪ್‌ಗಳ ಕಾಲೇಜುವಾರು/ಜಿಲ್ಲಾವಾರು ಮಾಹಿತಿಯನ್ನು ಅನುಬಂಧದಲ್ಲಿ ನೀಡಲಾಗಿದೆ |
| (ಇ) | ಈ ಯೋಜನೆಗೆ ನಿಗಧಿಪಡಿಸಿರುವ ಅನುದಾನ ಎಷ್ಟು; ಖರ್ಚು ಮಾಡಿರುವ ಒಟ್ಟು ಅನುದಾನ ಎಷ್ಟು? | 2019-20ನೇ ಸಾಲಿನಲ್ಲಿ ಪ್ರತಿ ಲ್ಯಾಪ್‌ಟಾಪ್‌ಗೆ ರೂ. 28320/- ರಂತೆ ಒಟ್ಟು 109916 ಲ್ಯಾಪ್‌ಟಾಪ್‌ಗಳಿಗೆ ರೂ. 311,28,21,120/-ಗಳ ಅನುದಾನ ಭರಿಸಲಾಗಿದೆ. ನಂತರದ ವರ್ಷಗಳಲ್ಲಿ ರಾಜ್ಯವಲಯದ ಆಯವ್ಯಯದಲ್ಲಿ ಈ ಯೋಜನೆಗೆ ಅನುದಾನ ನಿಗದಿಪಡಿಸಿರುವುದಿಲ್ಲ. |

ಸಂಖ್ಯೆ: ಇಡಿ 45 ಹೆಚ್‌ಪಿಸಿ 2023)

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು
ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ
ಹಾಗೂ ಕೌಶಲ್ಯಾಭಿವೃದ್ಧಿ,ಜೀವನೋಪಾಯ
ಹಾಗೂ ಉದ್ಯಮಶೀಲತೆ ಸಚಿವರು.